ಕನ್ನಡಪ್ರಭ

# ಸಾಮಾಜಿಕ ಪ್ರಗತಿ ಇಲ್ಲದೆ ಆರ್ಥಿಕ ಬೆಳವಣಿಗೆಗೆ ಹಿನ್ನಡೆ

## ಬೆಂಗಳೂರಿನ ಸೇಂಟ್ ಜೋಸೆಫ್ಸ್ ವಿವಿ ಪ್ರಾಧ್ಯಾಪಕ ಡಾ.ಕೆ. ಕನಿಷ್ಕ ಅಭಿಮತ | ವಿದ್ಯಾವರ್ಧಕ ಕಾಲೇಜಿನಲ್ಲಿ ರಾಷ್ಟ್ರೀಯ ವಿಚಾರ ಸಂಕಿರಣ

• **ಕನ್ನಡಪ್ರಭ ವಾರ್ತೆ** ಮೈಸೂರು

ಸಾಮಾಜಿಕ ಪ್ರಗತಿ ಇಲ್ಲದೆ ಆರ್ಥಿಕ ಬೆಳವಣಿಗೆಯು ಬಹುಪಾಲು ಜನರನ್ನು ಬಡತನದಲ್ಲಿಯೇ ಇರುವಂತೆ ಮಾಡುತ್ತದೆ. ಆದರೆ ಸವಲತ್ತುಗಳನ್ನು ಪಡೆದ ಕೆಲವರು ಮಾತ್ರ ಅಧಿಕ ಪ್ರಯೋಜನಗಳನ್ನು ಪಡೆಯುತ್ತಾರೆ ಎಂದು ಬೆಂಗಳೂರಿನ ಸೇಂಟ್ ಜೋಸೆಫ್ಸ್ ವಿವಿ ಸಹ ಪ್ರಾಧ್ಯಾಪಕ ಡಾ.ಕೆ. ಕನಿಷ್ಕ ಅಭಿಪ್ರಾಯಪಟ್ಟರು.

ನಗರದ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು, ಸ್ನಾತಕೋತ್ತರ ಕೇಂದ್ರ, ಐ.ಕ್ಯೂ.ಎ.ಸಿ ಘಟಕ ಜಂಟಿಯಾಗಿ ಉದ್ಯಮಶೀಲತೆ ಮತ್ತು ಸಮಾಜ ವಿಜ್ಞಾನದ ಸಮನ್ವಯ: ಅಂತರ್ಗತ ಸುಸ್ಥಿರ ಬೆಳವಣಿಗೆಯನ್ನು ಉತ್ತೇಜಿಸುವುದು ಕುರಿತು ಏರ್ಪಡಿಸಿದ್ದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಉದ್ಘಾಟಿಸಿ, ದಿಕ್ಸೂಚಿ ಭಾಷಣ ಮಾಡಿದರು.

ಸುಸ್ಥಿರ ಬೆಳವಣಿಗೆಯನ್ನು ಸಾಧಿಸುವುದು ಜಾಗತಿಕವಾಗಿ ಕಡ್ಡಾಯವಾಗಿದ್ದು, ಜಿಡಿಪಿ ಕೇಂದ್ರಿತ ಪ್ರಗತಿಯು ಅಸಮಾನತೆ ಮತ್ತು ಸಾಮಾಜಿಕ ಹೊರಗುಳಿಯುವಿಕೆಯನ್ನು ಮರೆಮಾಡುತ್ತದೆ. ಜಾಗತಿಕವಾಗಿ 665 ಮಿಲಿಯನ್ ಗಿಂತಲೂ ಹೆಚ್ಚು ಉದ್ಯಮಿಗಳು ಉದ್ಯಮವನ್ನು ಸ್ಥಾಪಿಸಿದ್ದಾರೆ ಮತ್ತು 200 ಮಿಲಿಯನ್ ಉದ್ಯೋಗವನ್ನು ನೀಡುವುದರ ಮೂಲಕ ಆರ್ಥಿಕತೆಯನ್ನು ಮುನ್ನಡೆಸುತ್ತಿದ್ದಾರೆ ಇಷ್ಟೆಲ್ಲ ಆದರೂ ಅಸಮಾನತೆಗಳು ಇನ್ನು ಮುಂದುವರೆದಿದೆ. ಭಾರತದಲ್ಲಿ ಜನಸಂಖ್ಯೆಯು ಸುಮಾರು ಶೇ. 48 ರಷ್ಟಿದ್ದರೂ ಮಹಿಳೆಯರು ಶೇ. 15ಕ್ಕಿಂತ ಕಡಿಮೆ ಉದ್ಯಮಗಳನ್ನು ಪ್ರತಿನಿಧಿಸುತ್ತಿದ್ದಾರೆ. ಉದ್ಯಮಶೀಲತೆ ಮತ್ತು ಸಮಾಜ ವಿಜ್ಞಾನಗಳು ಹೇಗೆ ಸಮಗ್ರ ಸುಸ್ಥಿರ ಬೆಳವಣಿಗೆಗೆ ಕಾರಣವಾಗುತ್ತವೆ ಮತ್ತು ರಾಷ್ಟ್ರೀಯ ಧ್ಯೇಯಗಳೊಂದಿಗೆ ಹೇಗೆ ಹೊಂದಿಕೆಯಾಗುತ್ತದೆ ಎಂಬುದು ಸಮಾಜ ವಿಜ್ಞಾನ ಸಂಶೋಧನೆಯಲ್ಲಿ ಉದ್ಯಮಶಿಲತಾ ಮಾದರಿಗಳನ್ನು ಉತ್ತೇಜಿಸುವುದು, ಒಳಗೊಳ್ಳುವಿಕೆಯ ಭಾಗವಹಿಸುವಿಕೆಯನ್ನು ಬೆಳೆಸಿಕೊಳ್ಳುವುದು ಹಾಗೂ ಪ್ರಭಾವ ನೀತಿ ಆಗಿರುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಗುಂಡಪ್ಪಗೌಡ ಮಾತನಾಡಿ, ಪಂಚವಾರ್ಷಿಕ ಯೋಜನೆಯಡಿಯಲ್ಲಿ ಶಿಕ್ಷಣ, ಉದ್ಯೋಗ ಇತ್ಯಾದಿಗಳಿಗೆ ಒತ್ತು ನೀಡಿದ್ದು ಇಂದಿನ ದಿನಮಾನಗಳಲ್ಲಿ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಹೆಚ್ಚಿನ ಉದ್ಯೋಗಾವಕಾಶ ಲಭ್ಯವಿದ್ದು, ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳು ಕೌಶಲ್ಯವನ್ನು ಬೆಳೆಸಿಕೊಳ್ಳುವುದರ ಮೂಲಕ ಉನ್ನತ ಹುದ್ದೆಗಳನ್ನು ಪಡೆಯುವಂತಾಗಲೀ ಇಂದು ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗಿಂತ ಎಂಸಿಎ ವಿದ್ಯಾರ್ಥಿಗಳು ಬೇಗನೇ ಕೆಲಸವನ್ನು ಪಡೆಯುತ್ತಿದ್ದು, ಇದು ಉತ್ತಮ ಬೆಳವಣಿಗೆಯಾಗಿದೆ. ದೇಶದಲ್ಲಿರುವ ಭ್ರಷ್ಟಾಚಾರವನ್ನು ಕಡಿಮೆಗೊಳಿಸಲು ಯುವಕರ ಪಾತ್ರ ಅತ್ಯಂತ ಮಹತ್ವವಾದುದ್ದೆಂದು ತಿಳಿಸಿದರು.

ಎಂ.ಕೆ. ತ್ರಿವೇಣಿ ಪ್ರಾರ್ಥಿಸಿದರು. ಸ್ನಾತಕೋತ್ತರ ಕೇಂದ್ರದ ಮುಖ್ಯಸ್ಥ ಡಾ.ಎಸ್. ಪೂರ್ಣಿಮ ಸ್ವಾಗತಿಸಿದರು.

ಪ್ರಾಂಶುಪಾಲ ಡಾ.ಎಸ್. ಮರೀಗೌಡ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಕೋಶಾಧ್ಯಕ್ಷ ಶ್ರೀಶೈಲ ರಾಮಣ್ಣವರ್, ಕಾಲೇಜು ನಿರ್ವಹಣಾ ಮಂಡಳಿ ಅಧ್ಯಕ್ಷ ಟಿ. ನಾಗರಾಜು, ಹಲವು ಕಾಲೇಜಿನ ಪ್ರತಿನಿಧಿಗಳು, ಅಧ್ಯಾಪಕ, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿಗಳು ಇದ್ದರು. ಎಂ.ಜಿ. ಸುನಿಲ್ ನಿರೂಪಿಸಿದರು. ಡಾ. ಶೋಭಾ ವಂದಿಸಿದರು.



ವಿದ್ಯಾವರ್ಧಕ ಕಾಲೇಜಿನಲ್ಲಿ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಬೆಂಗಳೂರಿನ ಸೇಂಟ್ ಜೋಸೆಫ್ಸ್ ವಿಶ್ವ ವಿದ್ಯಾಲಯದ ಸಹ ಪ್ರಾಧ್ಯಾಪಕ ಡಾ.ಕೆ. ಕನಿಷ್ಕ ಉದ್ಘಾಟಿಸಿದರು.